**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.**

**ಸಿ.ಸಿ.ನಂ.1002/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ವಿನಯ್** | | |
| **ಗಂಡಃತಂದೆಃಹೆಸರು** | **ಕೋದಂಡರಾಮ** | **ಪಿಡಬ್ಲೂಃ** | **1** |
| **ವಯಸ್ಸು** | **35 ವರ್ಷ** | **ಸಿಡಬ್ಲೂಃ** | **1** |
| **ಉದ್ಯೋಗಃ** | **ಚಾಲಕರು** | | |
| **ವಾಸ ಸ್ಥಳಃ** | **ಕೈವಾರ ಗ್ರಾಮ** | | |

**ದಿನಾಂಕ 29-05-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-**

ಚಾ.ಸಾ.2 ರಿಂದ 5 ನನ್ನ ಸ್ನೇಹಿತರು. ಆರೋಪಿ ನನ್ನ ಸ್ನೇಹಿತ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಮತ್ತು ಆರೋಪಿತನ ನಡುವೆ ಗಲಾಟೆ ನಡೆದಿಲ್ಲ. ಆರೋಪಿತನು ಚಾಕು ಮತ್ತು ಕಲ್ಲಿನಿಂದ ಹೊಡೆದಿಲ್ಲ, ಚಾಸಾ 5 ರವರ ಮೊಬೈಲ್ ನ್ನು ಹೊಡೆದು ಹಾಕಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಫ್ರಾಣಬೆದರಿಕೆಯನ್ನು ಹಾಕಿಲ್ಲ. ನಾನು ಜಮೀನಿನಲ್ಲಿ ಕೆಲಸ ಮಾಡುವಾಗ ಆಯಾ ತಪ್ಪಿ ಬಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಂತಾಮಣಿ ಪೋಲೀಸರು ಬಂದು ಕೆಲವು ದಾಖಲೆಗಳನ್ನು ಸಹಿಯನ್ನು ಪಡೆದಿರುತ್ತಾರೆ.

ಪೋಲಿಸರಿಗೆ ಯಾವುದೇ ದೂರನ್ನು ಕೊಟ್ಟಿಲ್ಲ. ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ದೂರನ್ನು ನಿ.ಪಿ.1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

ಪಿಡಬ್ಲೂಃ 1

ಸಾಕ್ಷಿಗೆ ಕೃತ್ಯ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ಕೃತ್ಯ ಸ್ಥಳದ ಪಂಚನಾಮೆಯನ್ನು ನಿ.ಪಿ.2 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.2(ಎ) ಎಂದು ಗುರುತಿಸಲಾಯಿತು. ನಿ.ಪಿ.1 ಮತ್ತು ನಿ.ಪಿ.2 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನ್ಯಾಯಾಲಯದ ಮುಂದಿರುವ ಚಾಕು ,ಕಲ್ಲನ್ನು ಮತ್ತು ಫೋನ್ ನ್ನು ನೋಡಿದರೆ ಗುರುತಿಸಲಾಗುವುದಿಲ್ಲ

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ–**

ದಿಃ 25-03-2024 ರಂದು ರಾತ್ರಿ ಸುಮಾರು 11.00 ಗಂಟೆ ಸಮಯದಲ್ಲಿ ನಾನು ಕೈವಾರ ಗ್ರಾಮದ ಗುಹಬಾವಿ ಬಳಿ ಇದ್ದಾಗ ಆರೋಪಿ ನನನ ಬಳಿ ಬಂದು ನನ್ನ ಮೇಲೆ ಜಗಳ ತೆಗೆದು ಅವಾಚ್ಯ ಶಬ್ಧಗಳಿಂದ ಬೈದನು ಎಂದರೆ ಸರಿಯಲ್ಲ. ನಾನು ಏಕೆ ಎಂದು ಕೇಳಿದ್ದಕ್ಕೆ ಚಾಕುವಿನಿಂದ ನನ್ನ ಎಡಗಣ್ಣಿನ ಉಬ್ಬಿನ ಬಳಿ ತಿವಿದು ರಕ್ತಗಾಯ ಮಾಡಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿ ಕಲ್ಲಿನಿಂದ ಕಿವಿ,ಬೆನ್ನು, ಎದೆಯ ಮೇಲೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದನು ಎಂದರೆ ಸರಿಯಲಲ. ನನ್ನ ಬಳಿ ಇದ್ದ ಚಾಸಾ 5 ರ ಮೊಬೈಲ್ ಫೋನ್ ನ್ನು ಹೊಡೆದು ಹಾಕಿ ಸುಮಾರು 30 ಸಾವಿರ ರೂ ನಷ್ಟ ಉಂಟು ಮಾಡಿದನು ಎಂದರೆ

ಸಿಡಬ್ಲೂಃ 1

ಸರಿಯಲ್ಲ. ನನಗೆ ಪ್ರಾಣ ಬೆದರಿಕೆ ಹಾಕಿದನು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ.

ದಿನಾಂಕಃ27-03-2024 ರಂದು ಪೋಲಿಸರು ಕೈವಾರ ಗ್ರಾಮದಲ್ಲಿ ಬಂದು ಮಸೀದಿಗೆ ಸೇರಿದ್ದ ಅಂಗಡಿ ಮಳಿಗೆಗಳ ಮುಂಭಾಗದಲ್ಲಿ ನನ್ನ ಮತ್ತು ಚಾಸಾ 3 ಮತ್ತು 4 ರವರ ಸಮಕ್ಷಮ ಪಂಚನಾಮೆಯನ್ನು ಬೆಳಗ್ಗೆ 9.00 ರಿಂದ 10.00 ಗಂಟೆವರೆಗೂ ಬರೆದು ಒಂದು ಚಾಕು, ಕಲ್ಲು ಮತ್ತು ಮೊಬೈಲ್ ಫೋನ್ ನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.

ನಿಪಿ 1 ರಿಂದ 2 ರ ಸಂಗತಿಗಳು ಗೊತ್ತಿದ್ದರು ನಾನು ಜಮೀನಿನಲ್ಲಿ ಬಿದ್ದು ಚಿಕಿತ್ಸೆ ಪಡೆದಿದ್ದೆ ಎಂದು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದಕೋಸ್ಕರ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ ಶ್ರೀ.ಆರ್.ಎಸ್.ಎಸ್. ಆರೋಪಿ ಪರ ವಕೀಲರಿಂದಃ- ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.